RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ


| | | |
|---|---|---|
| ಭಾಗ- IVA | ಬೆಂಗಳೂರು, ಶನಿವಾರ, ಏಪ್ರಿಲ್ ೧೬, ೨೦೧೬ (ಚೈತ್ರ ೨೭, ಶಕ ವರ್ಷ ೧೯೩೮) | ನಂ. ೬೪೨ |
| Part-IVA | Bengaluru, Saturday, April 16, 2016 (Chaitra 27, Shaka Varsha 1938) | No. 642 |


ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಗ್ರಾಅಪ 127 ಜಿಪಸ 2016, ದಿನಾಂಕ: 16-04-2016

**ಕರ್ನಾಟಕ ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಚುನಾವಣೆ) (ತಿದ್ದುಪಡಿ) ನಿಯಮಗಳು 2016**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ ಪ್ರಕರಣ 136ಬಿ ಮತ್ತು 138 ಯೊಡನೆ ಓದಿಕೊಂಡಂತೆ, ಪ್ರಕರಣ 311 ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆ) ನಿಯಮಗಳು, 1994ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಈ ಕೆಳಕಂಡ ಕರಡು ತಿದ್ದುಪಡಿ ನಿಯಮಗಳನ್ನು ಸದರಿ ಅಧಿನಿಯಮದ 311ನೇ ಪ್ರಕರಣದ ಉಪ ಪ್ರಕರಣ (1)ರ ಅಡಿಯಲ್ಲಿ ಅಗತ್ಯಪಡಿಸಲಾದಂತೆ, ಅದರಿಂದ ಬಾಧಿತರಾಗಬಹುದಾದ ವ್ಯಕ್ತಿಗಳ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಲಾಗಿದೆ ಮತ್ತು ಸದರಿ ನಿಯಮಗಳ ಕರಡನ್ನು ಸರ್ಕಾರಿ ರಾಜ್ಯ ಪತ್ರದಲ್ಲಿ ಪ್ರಕಟಗೊಂಡ 15 ದಿನಗಳ ನಂತರ ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ಸೂಚಿಸಲಾಗಿದೆ.

ಮೇಲೆ ನಿರ್ದಿಷ್ಟಪಡಿಸಿದ ಅವಧಿಯು ಮುಕ್ತಾಯವಾಗುವುದಕ್ಕೆ ಮೊದಲು ಕರಡು ನಿಯಮಗಳಿಗೆ ಸಂಬಂಧಿಸಿದಂತೆ, ಯಾವೊಬ್ಬ ವ್ಯಕ್ತಿಯಿಂದ ರಾಜ್ಯ ಸರ್ಕಾರವು ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಅಥವಾ ಸಲಹೆಯನ್ನು ರಾಜ್ಯ ಸರ್ಕಾರವು ಪರಿಗಣಿಸುವುದು, ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, 3ನೇ ಹಂತ, 3ನೇ ಮಹಡಿ, ಬಹುಮಹಡಿಗಳ ಕಟ್ಟಡ, ಡಾ: ಅಂಬೇಡ್ಕರ್ ವೀಧಿ, ಬೆಂಗಳೂರು-560001 ಇವರಿಗೆ ಕಳಹಿಸಬಹುದಾಗಿದೆ.

**ಕರಡು ನಿಯಮಗಳು**

**1. ಹೆಸರು ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆ) (ತಿದ್ದುಪಡಿ) ನಿಯಮಗಳು, 2016 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಕರ್ನಾಟಕ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟಿತವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ನಿಯಮ 1ರ ತಿದ್ದುಪಡಿ.-** ಕರ್ನಾಟಕ ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆ) ನಿಯಮಗಳು, 1994 (ಇಲ್ಲಿ ಇನ್ನು ಮುಂದೆ ಮೂಲ ನಿಯಮಗಳು ಎಂದು ಉಲ್ಲೇಖಿಸಲಾಗುವುದು)ರ ನಿಯಮ 1 ರ, ಉಪ ನಿಯಮ (1)ರಲ್ಲಿ, "ಕರ್ನಾಟಕ ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆ)" ಎಂಬ ಪದಗಳಿಗೆ "ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆ)" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**3. ನಿಯಮ 2ರ ತಿದ್ದುಪಡಿ.–** ಮೂಲ ನಿಯಮಗಳ ನಿಯಮ 2ರ ಖಂಡ (ಎ)ಗೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:–

"(ಎ) "ಅಧಿನಿಯಮ" ಎಂದರೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993, (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14);"

**4. ನಿಯಮ 3ಬಿಎ ಸೇರಿಸುವುದು.–** ಮೂಲ ನಿಯಮಗಳ, ನಿಯಮ 3ಬಿಯ ನಂತರ ಈ ಕೆಳಕಂಡ ನಿಯಮವನ್ನು ಸೇರಿಸತಕ್ಕದ್ದು ಅಂದರೆ,–

**"3ಬಿಎ ವಿಪ್ ಜಾರಿ ಮಾಡುವ ವಿಧಾನ.–** (1) ರಾಜಕೀಯ ಪಕ್ಷಗಳು ತಮ್ಮ ಪಕ್ಷದ ತಾಲ್ಲೂಕು ಪಂಚಾಯತಿಗಳ ಸದಸ್ಯರಿಗೆ ಅಥವಾ ಸದಸ್ಯನಿಗೆ ವಿಪ್ ಜಾರಿಗೊಳಿಸಲು ಉದ್ದೇಶಿಸಿದ್ದಲ್ಲಿ, ಆ ವಿಪ್‌ನ್ನು ಜಾರಿಗೊಳಿಸುವುದಲ್ಲದೇ ವಿಪ್ ಜಾರಿಗೊಳಿಸುವುದನ್ನು ನಿಶ್ಚಿತಗೊಳಿಸುವುದಕ್ಕಾಗಿ ವಿಪ್‌ನ ಪ್ರತಿಯನ್ನು ಚುನಾವಣಾ ಆಯೋಗಕ್ಕೆ ನೀಡತಕ್ಕದ್ದು. ಮತದಾನ ನಡೆಯುವ ದಿನಾಂಕದಂದು ಅಥವಾ ದಿನಾಂಕಗಳಲ್ಲಿ ಮತದಾನ ನಡೆಯುವ ಸ್ಥಳದ ಹೊರಗೆ ಚುನಾವಣಾ ಆಯೋಗವು ತನ್ನ ಕೇಂದ್ರವನ್ನು ಸ್ಥಾಪಿಸತಕ್ಕದ್ದು. ಸದರಿ ಕೇಂದ್ರದಲ್ಲಿ ತಾಲ್ಲೂಕು ಪಂಚಾಯತ್ ಸದಸ್ಯನಿಗೆ ಹಾಜರಾತಿ ತೆಗೆದುಕೊಳ್ಳುವುದರ ಜೊತೆಗೆ ಈ ಕೆಳಕಂಡ ಮಾಹಿತಿಯನ್ನು ಪ್ರತಿ ತಾಲ್ಲೂಕು ಪಂಚಾಯತ್ ಸದಸ್ಯನಿಂದ ಪಡೆಯತಕ್ಕದ್ದು. ಅಂದರೆ.–

| ಕ್ರಮ ಸಂಖ್ಯೆ | ವಿವರ | |
|---|---|---|
| 01 | ಸದಸ್ಯರ ಹೆಸರು ಮತ್ತು ವಿಳಾಸ | |
| 02 | ಸದಸ್ಯನು ಸೇರಿರುವ ರಾಜಕೀಯ ಪಕ್ಷವು ಸದಸ್ಯನಿಗೆ ವಿಪ್ ಜಾರಿ ಮಾಡಿದೆಯೇ? | ರಾಜಕೀಯ ಪಕ್ಷದ ಹೆಸರು :<br>ವಿಪ್ ಜಾರಿ ಮಾಡಿದೆಯೇ: |
| 03 | ಜಾರಿ ಮಾಡಿದ್ದಲ್ಲಿ ಸದಸ್ಯರ ಗಮನಕ್ಕೆ ಬಂದಿದೆಯೇ? | ಹೌದು ಅಥವಾ ಇಲ್ಲ |
| 04 | ಬಂದಿಲ್ಲದಿದ್ದಲ್ಲಿ, ಈಗ ವಿಪ್ ಪಡೆಯಲು ಇಚ್ಛಿಸಿದ್ದಾರೆಯೇ? | ಹೌದು ಅಥವಾ ಇಲ್ಲ |
| 05 | ವಿಪ್ ಪಡೆದಿದ್ದಕ್ಕೆ ಸ್ವೀಕೃತಿ (ಸದಸ್ಯರ ಸಹಿಯೊಂದಿಗೆ) | |
| 06 | ವಿಪ್ ನಿರಾಕರಿಸಲಾಗಿದೆಯೇ? | |

ಚುನಾವಣಾ ಆಯೋಗದಿಂದ ನಿರ್ದಿಷ್ಟಪಡಿಸಿದ ಅಧಿಕಾರಿಯ ಸಹಿ

(2) ವಿಪ್ ಪಡೆಯಲು ನಿರಾಕರಿಸಿದರೆ ಅಥವಾ ಉಲ್ಲಂಘಿಸಿದರೆ ಅಂತಹ ಮಾಹಿತಿಯನ್ನು ಚುನಾವಣಾ ಆಯೋಗದ ಕೇಂದ್ರದ ಅಧಿಕಾರಿಯು ಚುನಾವಣಾ ಆಯೋಗಕ್ಕೆ ಘಟನೆ ನಡೆದ ಕೂಡಲೇ ವರದಿ ನೀಡತಕ್ಕದ್ದು.

(3) ಚುನಾವಣಾ ಆಯೋಗವು ಉಪನಿಯಮ (2) ರಲ್ಲಿ ಮಾಹಿತಿಯನ್ನು ಸ್ವೀಕರಿಸಿದ ನಂತರ ಸಾಧ್ಯವಾದಷ್ಟು ಬೇಗನೆ ಪ್ರಕರಣ 175ಬಿ ರನ್ವಯ ಕ್ರಮ ತೆಗೆದುಕೊಳ್ಳತಕ್ಕದ್ದು.

(4) ಚುನಾವಣಾ ಪ್ರಕ್ರಿಯೆಯನ್ನು ವಿಡಿಯೋ ಗ್ರಾಫ್ ಮಾಡತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಎಂ.ಬಿ. ಥೋತ್ರೆ**
ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಫಿ7) 500 ಪ್ರತಿಗಳು